# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2021-22ನೇ ಸಾಲಿನ ಮೀನುಗಾರಿಕೆ ಇಲಾಖೆಯ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ ಮತ್ತು 4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು" ಅಡಿಯಲ್ಲಿ ಪ್ರಥಮ ಕಂತಿನಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:-1) ಆದೇಶ ಸಂಖ್ಯೆ: ಪಸಂಮೀ/ಇ-166/ಮೀಇಯೋ/2021, ದಿನಾಂಕ: 26-04-2021.

2) ಆದೇಶ ಸಂಖ್ಯೆ: ಪಸಂಮೀ/ಇ-164/ಮೀಇಯೋ/2020, ದಿನಾಂಕ: 15-04-2021,19-04-2021 ಮತ್ತು 28-04-2021.

3) ಪತ್ರ ಸಂಖ್ಯೆ: DoF-ADMNOBGT/8/2021, ದಿನಾಂಕ: 29-04-2021.

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ವಿವಿಧ ರಾಜ್ಯ ವಲಯ, ಕೇಂದ್ರ ವಲಯ ಮತ್ತು ಕೇಂದ್ರ ಪುರಸ್ಕೃತ ಜಿಲ್ಲಾ ಪಂಚಾಯತ್ ಯೋಜನೆಗಳನ್ನು ಸಂಬಂಧಪಟ್ಟ ಹುದ್ದೆಗಳೊಂದಿಗೆ 2021-22ನೇ ಸಾಲಿಗೆ ಮುಂದುವರೆಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶಗಲ್ಲಿ, 2021-22ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಕೆಳಕಂಡ ಲೆಕ್ಕ ಶೀರ್ಷಿಕೆ 2405-00-001-0-01 ರಡಿ ರೂ.447.50 ಲಕ್ಷ ಗಳನ್ನು ಮತ್ತು ರೂ.120.50 ಲಕ್ಷಗಳನ್ನು ವೇತನ ಹಾಗೂ ಕಛೇರಿ ವೆಚ್ಚಕ್ಕಾಗಿ ಮತ್ತು 2021-22ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನ ಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ಹಾಗೂ "4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು" ರಾಜ್ಯವಲಯದಡಿ ರೂ.3627.44 ಲಕ್ಷ ರೂಪಾಯಿಗಳನ್ನು ಪ್ರಥಮ ಕಂತಿನ ಅನುದಾನವಾಗಿ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ದಿನಾಂಕ: 05.04.2021 ರ ಆದೇಶದಲ್ಲಿ 2021-22ನೇ ಸಾಲಿಗೆ ಮೀನುಗಾರಿಕೆ ಇಲಾಖೆಗೆ 2405- ಮೀನುಗಾರಿಕೆ ಮತ್ತು 4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು ಅಡಿಯಲ್ಲಿ ಅನುದಾನ ಒದಗಿಸಲಾಗಿದೆ. ದಿನಾಂಕ: 07/13.04.2021 ರ ಪ್ರಸ್ತಾವನೆಗಳಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಮರುಮೌಲ್ಯೀಕರಣ (revalidation) ನಿರೀಕ್ಷಣೆಯಲ್ಲಿ ಪ್ರಥಮ ಕಂತಿನ ಅನುದಾನ ಬಿಡುಗಡೆಯನ್ನು ಕೋರಲಾಗಿರುವುದಿಲ್ಲ. ಮುಂದುವರೆದು, ಪ್ರಸಕ್ತ ಕೇಂದ್ರ ಪುರಸ್ಕೃತ ಯೋಜನೆಗಳ ಮರುಮೌಲ್ಯೀಕರಣ (revalidation) ದೃಢೀಕರಿಸಿಕೊಂಡಿದ್ದು, ಶೇಕಡ 25ರ ಅನುಪಾತದಲ್ಲಿ ಪ್ರಥಮ ಕಂತಿನಲ್ಲಿ 2405-ಮೀನುಗಾರಿಕೆ ಮತ್ತು 4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು ಅಡಿಯಲ್ಲಿ ರೂ. 1544.75 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

Kamakshi U2A.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, 2021-22ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು ಅನಿಷ್ಠಾನಗೊಳಿಸಲು ರೂ.1544.75 ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-164 ಮೀಇಯೋ 2021, ಬೆಂಗಳೂರು**
**ದಿನಾಂಕ: 07-05-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ಹಾಗೂ "4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು" ರಾಜ್ಯವಲಯದಡಿ ರೂ.1544.75 ಲಕ್ಷ (ಒಂದು ಸಾವಿರದ ಐದುನೂರ ನಲವತ್ತನಾಲ್ಕು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಕೆಳಕಂಡ ಲೆಕ್ಕ ಶೀರ್ಷಿಕೆಗಳ ಮುಂದೆ ನಮೂದಿಸಿರುವಂತೆ ಪ್ರಥಮ ಕಂತಿನ ಅನುದಾನ ಬಿಡುಗಡೆ ಮಾಡಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಯೋಜನೆಯ ಹೆಸರು | ಲೆಕ್ಕ ಶೀರ್ಷಿಕೆ | ಆಯವ್ಯಯ 2021-22 ರಲ್ಲಿ ಒದಗಿಸಿದ ಅನುದಾನ | 2021-22ರಲ್ಲಿ ಪ್ರಥಮ ಕಂತಿನಲ್ಲಿ ಬಿಡುಗಡೆ ಮಾಡಲಾದ ಅನುದಾನ |
|---|---|---|---|---|
| 1) | ನೀಲಿಕ್ರಾಂತಿ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ ಕೇಂದ್ರ ಪುರಸ್ಕೃತ ಯೋಜನೆ | 2405-00-101-0-58 | | |
| | ಸಹಾಯಧನ | 106 | 2546.00 | 636.50 |
| | ಪರಿಶಿಷ್ಟ ಜಾತಿ ಉಪ ಯೋಜನೆ | 422 | 477.00 | 119.25 |
| | ಗಿರಿಜನ ಉಪ ಯೋಜನೆ | 423 | 160.00 | 40.00 |
| | | | **3183.00** | **795.75** |
| 2) | ಮೀನುಗಾರಿಕೆ ಸಹಕಾರಿ ಸಂಸ್ಥೆಗಳು / ಮೀನುಗಾರರ ಕಲ್ಯಾಣ | 2405-00-120-0-07-106 | 496.00 | 124.00 |
| | | **2405-ಒಟ್ಟು** | **3679.00** | **919.75** |
| 3) | ಮೀನುಗಾರಿಕೆ ಬಂದರುಗಳ ನಿರ್ಮಾಣ ಕೇಂದ್ರ ಪುರಸ್ಕೃತ ಯೋಜನೆ | 4405-00-103-6-01-139 | 2500.00 | 625.00 |
| | | **4405-ಒಟ್ಟು** | **2500.00** | **625.00** |
| | | **ಒಟ್ಟು** | **6179.00** | **1544.75** |



Kamakshi U.A.

ಮೇಲ್ಕಂಡಂತೆ ಬಿಡುಗಡೆ ಮಾಡಲಾದ ಅನುದಾನದ ಹಣವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸಿ ಕೊಂಡು ಕಡ್ಡಾಯವಾಗಿ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು 2000ಗಳನ್ನು ಹಾಗೂ ಖರೀದಿ ನಿಯಮಗಳನ್ನು ಪಾಲಿಸತಕ್ಕದ್ದು ಮತ್ತು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಖ2/ಪಿಎಂಯು/92/2015-16, ದಿನಾಂಕ: 27-03-2018ರ ಕ್ರಮ ಸಂಖ್ಯೆ: 01 ರಿಂದ 04 ರಲ್ಲಿ ಸೂಚಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು.

ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ-166/ಮೀಇಯೋ/2021, ದಿನಾಂಕ: 26-04-2021 ರನ್ವಯ ಮುಂದುವರೆಸಲಾದ ಯೋಜನೆಗಳನ್ನು ಅನುಮೋದಿಸಿರು ವಂತೆ ಅನುಷ್ಠಾನಗೊಳಿಸತಕ್ಕದ್ದು.

ಸದರಿ ವೆಚ್ಚವನ್ನು 2020-21ನೇ ಸಾಲಿನ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ಮತ್ತು "4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚ"ಗಳಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್ ಡಿ/1/ಟಿಎಫ್ ಪಿ/2021, ದಿನಾಂಕ: 05-04-2021 ರಲ್ಲಿ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹಾಗೂ ಕಡತ ಸಂಖ್ಯೆ: ಆಇ-176 ವೆಚ್ಚ-4/2021 ದಿ:03.05.2021 ರಲ್ಲಿ ನೀಡಲಾದ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kamakshi U. A. 7/5/21
(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ, ತೋಟಗಾರಿಕೆ ಮತ್ತು ಪಸಂಮೀ ಇಲಾಖೆ
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
7) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8) ಸಂಬಂಧಪಟ್ಟವರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
9) ಶಾಖಾ ರಕ್ಷಾ, ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.